ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಮುಖ್ಯಮಂತ್ರಿಗಳು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 20/09/2019

# ಬೆಳಗಾವಿ ಅಧಿವೇಶನ ರದ್ದು: ಸಿಎಂ ಸಮರ್ಥನೆ

ಬೆಂಗಳೂರು: ಬೆಳಗಾವಿ ಭಾಗದಲ್ಲಿ ಪ್ರವಾಹದಿಂದ ಸಾಕಷ್ಟು ಹಾನಿಗೀಡಾಗಿ ಜನತೆ ಸಂಕಷ್ಟಕ್ಕೆ ಸಿಲುಕಿದ್ದಾರೆ. ಜಿಲ್ಲಾಡಳಿತ ಪರಿಹಾರ ಕಾರ್ಯಗಳಲ್ಲಿ ತೊಡಗಿದೆ. ಹೀಗಾಗಿ, ಅಲ್ಲಿ ವಿಧಾನಮಂಡಲ ಅಧಿವೇಶನ ನಡೆಸಿದರೆ ಪರಿಹಾರ ಕಾರ್ಯಾಚರಣೆಗೆ ತೊಂದರೆಯಾಗುವ ಸಾಧ್ಯತೆಯಿದೆ. ಹೀಗಾಗಿ, ಚಳಿಗಾಲದ ಅಧಿವೇಶನ ಬೆಂಗಳೂರಿನಲ್ಲಿಯೇ ನಡೆಸಲು ತೀರ್ಮಾನಿಸಲಾಗಿದೆ ಎಂದು ಮುಖ್ಯಮಂತ್ರಿಯವರ ಕಚೇರಿ ಪ್ರಕಟಣೆ ತಿಳಿಸಿದೆ. ಬೆಳಗಾವಿಯಲ್ಲಿ ಉಂಟಾದ ಪ್ರವಾಹ ಹಾಗೂ ಅತಿವೃಷ್ಟಿಯಿಂದ ಸುಮಾರು 872 ಗ್ರಾಮಗಳು ಬಾಧಿತಗೊಂಡಿದೆ. ಇದಲ್ಲದೆ 70 ಸಾವಿರಕ್ಕಿಂತ ಹೆಚ್ಚಿನ ಮನೆಗಳಿಗೆ ಹಾನಿಯಾಗಿದೆ. ಪ್ರತಿವರ್ಷ ಅಧಿವೇಶನ ನಡೆಸಿದಂತೆ ಈ ಬಾರಿಯೂ ಆ ಬೆಳಗಾವಿಯಲ್ಲಿ ಅಧಿವೇಶನ ನಡೆಸಿದರೆ ಸಂಕಷ್ಟಕ್ಕೆ ಸಿಲುಕಿರುವ ಜನರಿಗೆ ಪರಿಹಾರ ಕಾರ್ಯಾಚರಣೆಗೆ ಅಡ್ಡಿಯಾಗಲಿದೆ. ಈ ಎಲ್ಲ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿಯೇ ಅಧಿವೇಶನಕ್ಕೆ ನಿರ್ಧರಿಸಲಾಗಿದೆ ಎಂದು ಹೇಳಲಾಗಿದೆ.

4